**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** M/s Mytrah Vayu (Narmada) Private Limited ಕಂಪನಿಗೆ ಬೀದರ್ ಜಿಲ್ಲೆಯ ವಿವಿಧ ಗ್ರಾಮಗಳಲ್ಲಿ 160 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಹಂಚಿಕೆ ಆದೇಶ ನೀಡುವ ಬಗ್ಗೆ.

**ಓದಲಾಗಿದೆ:**
1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಏಕ ಕಡತ ಸಂಖ್ಯೆ: KREDL/08/ MV(N) PL-160MW/Bhalki/Bidar/2017/1453-M
2. ದಿನಾಂಕ: 16.02.2017 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು.

* * *

**ಪ್ರಸ್ತಾವನೆ :-**

ಮೇಲೆ ಓದಲಾದ ಕ್ರಮ ಸಂಖ್ಯೆ : (1) ರಲ್ಲಿ ವ್ಯವಸ್ಥಾಪಕ M/s Mytrah Vayu (Narmada) Private Limited ಕಂಪನಿಯವರು ಬೀದರ್ ಜಿಲ್ಲೆಯ, ಬಸವಕಲ್ಯಾಣ, ಹುಮನಾಬಾದ್ ಮತ್ತು ಬಾಲ್ಕಿ ತಾಲ್ಲೂಕುಗಳ ಕಡೇಪುರ, ಧಾನೂರ, ನಾರಾಯಣಪುರ, ಗಾಡಿರಪಲ್ಲಿ, ಹುಣಸಾಲ್, ಸುಲ್ತಾನಬಾದ್‌ವಾಡಿ, ದುಂಬಲ್ಗುಂಡಿ, ವಾರ್ವಟ್ಟಿ ಕುರ್ದ್, ಚೀನ್ಕೆರ್, ಮಲ್ಕಪುರ್‌ವಾಡಿ, ಧುಮನ್ಸುರ್, ಗೋಡ್ವಂಟಿ, ಹುಮನಾಬಾದ್, ನಂದಗಾನ್, ಜನತಾನಗರ್, ಮೋಲ್ಕೆರ್, ರಾಮ್‌ಪುರ್ವಾಡಿ, ಇಸ್ಲಾಂಪುರ್, ಯರ್ಬಾಗ್, ಇಂದಿರಾನಗರ, ಹನಮಂತವಾಡಿ, ಹನ್‌ಡ್ರಾಲ್. ಲಿಂಗದಹಳ್ಳಿ, ಬಸ್ತಾಪುರ, ಪಾರ್ಥಪುರ, ಲಲ್ದಾಹರಿ, ಸಿಂಧ್‌ಖೇರ, ನಾರಾಯಣಪುರ, ಜನಪುರ್, ಶಿವಪುರ್, ಬಾಲ್ಕುಂಡ, ಗೌರ್ ಮತ್ತು ಸುನ್‌ಜನ ಗ್ರಾಮಗಳಲ್ಲಿ 160 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆ ಹಂಚಿಕೆ ಕೋರಿ ಸಲ್ಲಿಸಿರುವ ಪ್ರಸ್ತಾವನೆಯನ್ನು ಪರಿಶೀಲಿಸಿ, ಸದರಿ ಪ್ರಸ್ತಾವನೆಯನ್ನು ಹಂಚಿಕೆ ಸಮಿತಿ ಸಭೆಯ ಮುಂದೆ ಮಂಡಿಸುವ ಸಲುವಾಗಿ ಯೋಜನೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು, ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶ ಹಾಗೂ ಇನ್ನಿತರೆ ವಿವರಗಳೊಂದಿಗೆ ವ್ಯವಸ್ಥಾಪಕ ನಿರ್ದೇಶಕರು, ಕ್ರೆಡಲ್ ಇವರು ಏಕ ಕಡತ ಪದ್ಧತಿಯಲ್ಲಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರನ್ವಯ ದಿನಾಂಕ :16.02.2017 ರಂದು ನಡೆದ ಹಂಚಿಕೆ ಸಮಿತಿ ಸಭೆ ನಡವಳಿಯಲ್ಲಿ ಸಮಿತಿಯು ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, M/s Mytrah Vayu (Narmada) Private Limited ಕಂಪನಿಯವರು ಬೀದರ್ ಜಿಲ್ಲೆಯ, ಬಸವಕಲ್ಯಾಣ, ಹುಮನಾಬಾದ್ ಮತ್ತು ಬಾಲ್ಕಿ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ 160 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಸಂಬಂಧಿಸಿದಂತೆ ವಿಸ್ತೃತ ಯೋಜನಾ ವರದಿಯನ್ನು ಸಿದ್ಧಪಡಿಸಿ ಕೆ.ಆರ್.ಇ.ಡಿ.ಎಲ್ ಗೆ ಸಲ್ಲಿಸಿರುವುದರಿಂದ ಸದರಿ ಕಂಪನಿಗೆ 160 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲು ಸಮಿತಿಯು ಸರ್ವಾನುಮತದಿಂದ ಶಿಫಾರಸ್ಸು ಮಾಡಿರುತ್ತದೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಸರ್ಕಾರವು ಪರಿಶೀಲಿಸಿದ್ದು, ಸದರಿ ಶಿಫಾರಸ್ಸಿನನ್ವಯ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 83 ಎನ್‌ಸಿಇ 2017, ಬೆಂಗಳೂರು, ದಿನಾಂಕ : 12.12.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು, M/s Mytrah Vayu (Narmada) Private Limited ಕಂಪನಿಯವರು ಬೀದರ್ ಜಿಲ್ಲೆಯ, ಬಸವಕಲ್ಯಾಣ, ಹುಮನಾಬಾದ್ ಮತ್ತು ಬಾಲ್ಕಿ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ 160 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಹಂಚಿಕೆ ಮಾಡಿ ಆದೇಶಿಸಲಾಗಿದೆ.

...2)

## Geographical area description for 160 MW capacity wind power project

| Proposed capacity in MW. | Taluk District | Near by villages of the proposed area and district. | Geographical area description of the project |
|---|---|---|---|
| 160MW (72 Nosx 2200kW) | Basavakalyana, Bhalki and Homnabad Taluks, Bidar District | Kadepur, Dhanura, Narayanapura, Gadirapali, Hunsnal, Sultanabadwadi, Dubalgundi, Warwatti Khurd, Chinkhear, Malkapurwadi, Dhumansur, Godwanti, Homanabad, Nandgaon, Janatanagar, Godwanti, Molkhear, Rampurwadi, Islampur, Yerbag, Janatanagar, Indiranagar, Hanmantwadi, Handral | The proposed areas is Surrounded by<br>Part-A (Point-A-B-C-D-E-F-G-H-I-J-K-L-M-A)<br>Part-B (Point-N-O-P-Q-N)<br>Part-C (Point R-S-T-U-R)<br>Part-D (Point V-W-X-Y-V)<br>And area is held in the following Geographical Co-ordinates as:<br>**56 G/1: PART-A**<br>**Point A**:Lat:17°44′42″- Long 77°0′28.8″N<br>**Point B**:Lat:17°49′3″- Long 77°0′6.84″N<br>**PointC**:Lat:17°46′46.92″- Long 77°3′48.24″N<br>**Point D**:Lat: 17°49′31.08″- Long 77°7′49.44″N<br>**Point E**:Lat:17°52′48″- Long 77°3′4.32″N<br>**Point F**:Lat:17°52′59.16″- Long 77°3′13.68″N<br>**PointG**:Lat:17°50′30.12″- Long 77°8′27.96″N<br>**Point H**:Lat:17°54′23.04′- Long 77°8′31.2″N<br>**Point I**:Lat:17°54′55.44″- Long 77°4′27.48″N<br>**Point J**:Lat:17°49′18.48″- Long 77°0′5.04″N<br>**Point K**:Lat:17°55′41.16″- Long 77°0′5.76″N<br>**Point L**:Lat:17°55′40.08″- Long 77°12′0″N<br>**Point M**:Lat:17°44′36.6″- Long 77°12′6.12″N<br>**Peaks:** 660, 627, 653, 633, 656, 657, 670, 653 & 665m AMSL. |
| | | Lingadhalli, Basatpura, Partapur, Laldhari, Sindkhera | **56 G/2: PART-B**<br>**Point N**: Lat: 17°43′48.72″- Long 77°0′6.48″N<br>**Point O**: Lat: 17°44′23.64″- Long 77°0′6.48″N<br>**PointP**: Lat: 17°44′19.32″-Long 77°11′59.28″N<br>**PointQ**:Lat: 17°43′47.28″-Long 77°11′59.28″N<br>Peaks: 653 & 650 m AMSL |
| | | Narayanpur, Janapur, Shivapur, Balkunda, Gaur | **56 C/13: PART-C**<br>**PointR**:Lat: 17°50′39.48″- Long 76°55′23.88″N<br>**Point S**: Lat: 17°55′6.24″- Long 76°55′15.96″N<br>**PointT**: Lat: 17°55′9.84″- Long 76°59′59.64″N<br>**PointU**:Lat: 17°50′47.76″- Long 77°0′3.24″N<br>**Peaks:** 640, 653, 626, 614, 623, 626, 613 & 624 m AMSL |
| | | Sunjana | **56 C/14: PART-D**<br>**PointV**:Lat: 17°43′54.12″-Long 76°56′44.88″N<br>**PointW**:Lat:17°44′34.08″-Long 76°56′43.44″N<br>**PointX**:Lat: 17°44′33.36″- Long 76°59′50.28″N<br>**PointY**:Lat: 17°43′49.8″- Long 76°59′51″N<br>Peaks: 586 m AMSL |

**ಷರತ್ತುಗಳು:-**

1. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

..3)

2. ಅಭಿವೃದ್ಧಿದಾರರು ಈ ಯೋಜನೆಯನ್ನು ಸರ್ಕಾರಿ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011 ದಿನಾಂಕ: 18.07.2011 ರಲ್ಲಿ ನಿಗದಿಪಡಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.
3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿಪಡಿಸಬೇಕು.
4. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.
5. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ / ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಅನುಷ್ಠಾನಗೊಳಿಸುತ್ತಿದ್ದಲ್ಲಿ, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.
6. ಅಭಿವೃದ್ಧಿದಾರರು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಮಾರಾಟ ಮಾಡುವ ಕುರಿತು ಕೆ.ಪಿ.ಟಿ.ಸಿ.ಎಲ್ ನೊಂದಿಗೆ ವೀಲಿಂಗ್ ಅಂಡ್ ಬ್ಯಾಂಕಿಂಗ್ ಒಡಂಬಡಿಕೆಯನ್ನು ಮಾಡಿಕೊಳ್ಳಲು ಹಾಗೂ ಸ್ವಂತ ಬಳಕೆ ಮಾಡಿಕೊಳ್ಳಲು / ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಮತ್ತು ಕೆ.ಇ.ಆರ್.ಸಿ ರವರು ಅನುಮೋದಿಸಿ ಚಾಲ್ತಿಯಲ್ಲಿರುವ ದರದಲ್ಲಿ ಸಂಬಂಧಪಟ್ಟ ವಿದ್ಯುತ್ ಸರಬರಾಜು ಕಂಪನಿಗಳೊಂದಿಗೆ ಸರ್ಕಾರದ ಆದೇಶ ಸಂಖ್ಯೆ : ಇಎನ್ 93 ವಿಎಸ್‌ಇ 2017 ದಿನಾಂಕ : 27.10.2017 ರಲ್ಲಿನ ಅಂಶಗಳನ್ನು ಅನುಸರಿಸುವ ಷರತ್ತುಗಳಿಗೊಳಪಟ್ಟು ವಿದ್ಯುತ್ ಖರೀದಿ ಒಡಂಬಡಿಕೆಯನ್ನು ಮಾಡಿಕೊಳ್ಳಲು ಅನುಮತಿಸಲಾಗಿದೆ.
7. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.
8. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.
9. ಸದರಿ ಕಂಪನಿಯವರು ಯೋಜನೆಗೆ ಸಂಬಂಧಿಸಿದಂತೆ ಬಾಕಿ ಇರುವ ಡಿಪಿಆರ್ ಮೊತ್ತ ಹಾಗೂ ಇನ್ನಿತರೆ ಶುಲ್ಕಗಳನ್ನು ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಕೆ.ಆರ್.ಇ.ಡಿ.ಎಲ್.ಗೆ ಸಂದಾಯ ಮಾಡತಕ್ಕದ್ದು.
10. ಕರ್ನಾಟಕ ಭೂಸುಧಾರಣಾ ಕಾಯ್ದೆ 1961 ಕಲಂ 109 ರಡಿ ಕಂದಾಯ ಇಲಾಖೆಯಿಂದ ಅನುಮತಿ ಪಡೆದುಕೊಂಡು ಭೂಪರಿವರ್ತನೆಯಾದ ನಂತರವೇ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳತಕ್ಕದ್ದು.
11. ಈ ಯೋಜನೆಗೆ ಸರ್ಕಾರದ ಕೈಗಾರಿಕಾ ನೀತಿ 2014-19 ರನ್ವಯ ಅನ್ವಯಿಸುವ ಸವಲತ್ತುಗಳು ಲಭ್ಯವಾಗುತ್ತವೆ.

ಸದರಿ ಆದೇಶವನ್ನು ರದ್ದುಪಡಿಸುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ವಿ.ಶ್ರೀನಿವಾಸಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.
12/12/2017

**ಇವರಿಗೆ:**
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗಾಗಿ.

**ಪ್ರತಿ:**

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
2 ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು), ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
4 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
5 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು.
6 ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ, ಬೆಂಗಳೂರು.
7 ಜಿಲ್ಲಾಧಿಕಾರಿ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.
8 ಉಪ ಅರಣ್ಯ ಸಂರಕ್ಷಣಾಧಿಕಾರಿ, ಚಿತ್ರದುರ್ಗ ಪ್ರಾದೇಶಿಕ ವಿಭಾಗ, ಚಿತ್ರದುರ್ಗ.
9 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
10 M/s Mytrah Vayu (Narmada) Private Limited, Regd Office # 8000, Sy No. 109, Q-city, Nankramguda, Gachibowli, Hudrabad-500032, Telangana.
11 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
12 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
13 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.